# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **686** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸುವ ದಿನಾಂಕ** | : | **13/12/2024** |
| **ಉತ್ತರಿಸುವ ಸಚಿವರು** | : | **ಮಾನ್ಯ ಕಾರ್ಮಿಕ ಸಚಿವರು** |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಸಮಿತಿ ರಚನೆಯಾಗಿದ್ದು ರಾಜ್ಯದಲ್ಲಿ ಎಷ್ಟು ಹೊರಗುತ್ತಿಗೆ ಕಾರ್ಮಿಕರು ನೇಮಕಗೊಂಡಿದ್ದಾರೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಸಂಬಂಧಿಸಿದಂತೆ ಯಾವುದೇ ಸಮಿತಿ ರಚನೆಯಾಗಿರುವುದಿಲ್ಲ.<br><br>ಆದರೆ, ಬೀದರ್ ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಇಲಾಖೆಗಳಿಗೆ ಹೊರಗುತ್ತಿಗೆ ನೌಕರರನ್ನು ನಿಯೋಜಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ 2008ರಲ್ಲಿ ರಚನೆಯಾಗಿರುವ "ಬೀದರ್ ಜಿಲ್ಲಾ ಕಾರ್ಮಿಕರ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ' ಅಸ್ತಿತ್ವದಲ್ಲಿದ್ದು ಸದರಿ ಸಂಘದ ಮಾದರಿಯಲ್ಲಿ ಪ್ರಸ್ತುತ ಮೈಸೂರು, ಧಾರವಾಡ ಮತ್ತು ತುಮಕೂರು ಜಿಲ್ಲೆಗಳಲ್ಲಿ ಹೊರಗುತ್ತಿಗೆ ಕಾರ್ಮಿಕರ ಸೇವೆಗಳನ್ನು ಒದಗಿಸುವ ಸಂಬಂಧ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 7 ರನ್ವಯ ಸಹಕಾರ ಸಂಘ (ಸೊಸೈಟಿ) ಅನ್ನು ನೋಂದಾಯಿಸಲು ಸರ್ಕಾರದ ಆದೇಶ ಸಂಖ್ಯೆ: ಕಾಇ 301 ಎಲ್‌ಡಬ್ಲ್ಯೂಎ 2023, ದಿನಾಂಕ: 01/10/2024 ರನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತದೆ.<br><br>ಪ್ರಸ್ತುತ ಬೀದರ್ ಜಿಲ್ಲೆಯಲ್ಲಿನ **"ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ"** ದ ಮುಖಾಂತರ ಬೀದರ್ ಜಿಲ್ಲೆಯಲ್ಲಿನ ಸರ್ಕಾರದ ವಿವಿಧ ಇಲಾಖೆ/ನಿಗಮ/ಮಂಡಳಿಗಳಿಗೆ 2800 ಹೊರಗುತ್ತಿಗೆ ಸಿಬ್ಬಂದಿಯನ್ನು ನಿಯೋಜಿಸಲಾಗಿರುತ್ತದೆ. |
| ಆ) | ಕಲಬುರಗಿ ವಿಭಾಗದಲ್ಲಿ ಹೊರಗುತ್ತಿಗೆ ಕಾರ್ಮಿಕರ ಸೇವೆಯನ್ನು ಒದಗಿಸುವ ಸೊಸೈಟಿಯನ್ನು ರಚಿಸಲಾಗಿದೆಯೇ; ರಚಿಸಿದಲ್ಲಿ ನೊಂದಾಯಿತ ಫಲಾನುಭವಿಗಳು ಎಷ್ಟು; | ಕಲಬುರಗಿ ವಿಭಾಗದ ಬೀದರ್ ಜಿಲ್ಲೆಯಲ್ಲಿ 2008 ರಲ್ಲಿ "ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘ" ವನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುತ್ತದೆ. ಸದರಿ ಸೊಸೈಟಿಯಲ್ಲಿ 2800 ಫಲಾನುಭವಿಗಳನ್ನು ನೋಂದಾಯಿಸಲಾಗಿರುತ್ತದೆ. |
| ಇ) | ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಒಟ್ಟು ಎಷ್ಟು ಅನುದಾನ ಬಿಡುಗಡೆಯಾಗಿದೆ; | ಹೊರಗುತ್ತಿಗೆ ಕಾರ್ಮಿಕರ ನೇಮಕಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘಕ್ಕೆ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |
| ಈ) | ಸಂಘಟಿತ ಕಾರ್ಮಿಕರಿಗೆ ಗುರುತಿನ ಕಾರ್ಡ್ ವಿತರಣೆ ಮಾಡಿದ್ದು ಅದರ ಸದುಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ಸಂಘಟಿತ ಕಾರ್ಮಿಕರಿಗೆ ಗುರುತಿನ ಕಾರ್ಡ್ ವಿತರಣೆ ಮಾಡಿರುವುದಿಲ್ಲ. |

**ಕಡತ ಸಂಖ್ಯೆ: ಕಾಇ 518 ಎಲ್‌ಡಬ್ಲ್ಯೂಎ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**